# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾಸನ ಜಿಲ್ಲೆ ಅರಸೀಕೆರೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಾಸ್ಟರ್ ಪ್ಲಾನ್ ಪರಿಷ್ಕೃತ–1 ಕ್ಕೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ. ನಅಇ 381 ವ್ಯೆಅಪ್ರಾ 2005, ದಿನಾಂಕ: 13.12.05.

೨) ಮುಖ್ಯಾಧಿಕಾರಿಗಳು, ಪುರಸಭೆ: ಯೋಜನಾ ಪ್ರಾಧಿಕಾರ, ಅರಸೀಕೆರೆ ಇವರ ಪತ್ರ ಸಂಖ್ಯೆ. ಪುಯೋಪ್ರಾ:ಅ.ಕೆರೆ:ನಯೋವಿ: ಮಾಪ್ಲಾ:1:07-08, ದಿನಾಂಕ: 12.11.07.

೩) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ. ನಯೋ(20):ಉನಿ(ವಿವಿ)ಅರಸೀಕೆರೆ:ಮಯೋ:07-08.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಹಾಸನ ಜಿಲ್ಲೆ ಅರಸೀಕೆರೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಾಸ್ಟರ್ ಪ್ಲಾನ್ ಪರಿಷ್ಕೃತ–1 ಕ್ಕೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಮುಖ್ಯಾಧಿಕಾರಿಗಳು, ಪುರಸಭೆ: ಯೋಜನಾ ಪ್ರಾಧಿಕಾರ, ಅರಸೀಕೆರೆ ಇವರು ಅರಸೀಕರೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ–1) ನ್ನು ರೂಪಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ಇಲಾಖೆಯ ಮುಖಾಂತರ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3) ರ ಏಕ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು, ಅರಸೀಕೆರೆ ಪಟ್ಟಣದ ಜನಸಂಖ್ಯೆಯು 2001 ರಲ್ಲಿ 43,125 ರಷ್ಟಿದ್ದು, 20 ವರ್ಷಗಳ ಅವಧಿಗೆ ಅಂದರೆ 2021 ರ ವೇಳೆಗೆ ಜನಸಂಖ್ಯೆಯು 80,000 ಆಗಬಹುದೆಂದು ಅಂದಾಜಿಸಿ, ಮಹಾ ಯೋಜನೆ (ಪರಿಷ್ಕೃತ–1) ನ್ನು ತಯಾರಿಸಲಾಗಿದೆ. ಅರಸೀಕೆರೆ ಪಟ್ಟಣದ ಜನಸಂಖ್ಯೆಯ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನಾ ವ್ಯವಸ್ಥೆಯನ್ನು, ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವ ಹಾಗೂ ಮಹಾ ಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12(2) ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಕಾಯ್ದಿರಿಸಿ ಮಹಾ ಯೋಜನೆ (ಪರಿಷ್ಕೃತ–1) ನ್ನು ತಯಾರಿಸಿದ್ದು, ಸದರಿ ಮಹಾ ಯೋಜನೆ (ಪರಿಷ್ಕೃತ–1) ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ

ಪ್ರಕರಣ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಈ ವಿಷಯವನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ. ನಅಇ 76 ಮೈಅಪ್ರಾ 2008, ಬೆಂಗಳೂರು, ದಿನಾಂಕ: 3.5.2008.</u>

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾಸನ ಜಿಲ್ಲೆ, ಅರಸೀಕೆರೆ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-1) ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಭಾರತ ರಾಷ್ಟ್ರಾಧ್ಯಕ್ಷರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧. ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ.
೨. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೩. ಮುಖ್ಯಾಧಿಕಾರಿಗಳು, ಪುರಸಭೆ: ಯೋಜನಾ ಪ್ರಾಧಿಕಾರ, ಅರಸೀಕೆರೆ.
೪. ನಗರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಹಾಸನ.
೫. ನಗರ ಯೋಜನಾ ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಹಾಸನ.
೬. ಘನತೆವೆತ್ತ ರಾಜ್ಯಪಾಲರ ಸಲಹೆಗಾರರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
೭. ಕರ್ನಾಟಕ ರಾಜ್ಯಪತ್ರ.
೮. ಸರ್ಕಾರದ ಕಾರ್ಯದರ್ಶಿಗಳ/ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
೯. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.